ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು

(ಜಿಲ್ಲಾ ನಗರಾಭಿವೃದ್ಧಿ ಕೋಶ, ಬೆಂಗಳೂರು)

E-Mail :- dudc_burban@yahoo.com Phone No-08022211372/352

ಸಂಖ್ಯೆ: ಜಿನಕೋ/ತಾಶಾ-1/ಸಿಆರ್-139/2018-19 ದಿನಾಂಕ:26-02-2019

## ಸಭಾ ಸೂಚನಾ ಪತ್ರ

**ವಿಷಯ:** ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯ ನಗರಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಘನ ತ್ಯಾಜ್ಯ ನಿರ್ವಹಣಾ ನಿಯಮಗಳು 2016 ರ ರೀತ್ಯಾ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ಸಭೆಗೆ ಹಾಜರಾಗಲು ಕೋರಿ.

**ಉಲ್ಲೇಖ:**
1. ಘನ ತ್ಯಾಜ್ಯ ನಿರ್ವಹಣಾ ನಿಯಮಗಳು 2016.
2. ದಿನಾಂಕ: 13.02.2019 ರಂದು ನಡೆದ ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ನಡೆದ ವಿಡಿಯೋ ಸಂವಾದದ ನಡವಳಿಗಳು.
3. ಈ ಕಛೇರಿಯ ಸಮಸಂಖ್ಯೆಯ ಅಧಿಕೃತ ಜ್ಞಾಪನ ದಿನಾಂಕ:26-02-2019.

*****

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ನಿಯಮ 12 ರ ರೀತ್ಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಕುರಿತು ಮೇಲ್ವಿಚಾರಣೆ ನಡೆಸಲು, ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿಯನ್ನು ರಚಿಸಿ ಅದರಂತೆ ಕ್ರಮಕೈಗೊಳ್ಳಬೇಕಾಗಿರುತ್ತದೆ.

ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ 13.02.2019 ರಂದು ನಡೆದ ವಿಡಿಯೋ ಸಂವಾದದ ಉಲ್ಲೇಖ (2) ರ ನಡವಳಿಯ ರೀತ್ಯಾ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿಯನ್ನು ರಚಿಸಲು ನಿರ್ದೇಶನ ನೀಡಿರುತ್ತಾರೆ. ಅದರಂತೆ ಬೆಂಗಳೂರು ನಗರ ಜಿಲ್ಲೆಯ ನಗರಸ್ಥಳೀಯ ಸಂಸ್ಥೆಗಳ ಘನತ್ಯಾಜ್ಯ ನಿರ್ವಹಣೆಯ ಕುರಿತಾದ ಮೇಲ್ವಿಚಾರಣೆ ನಡೆಸಲು ಜಿಲ್ಲಾ ಮಟ್ಟದ ಮೇಲ್ವಿಚಾರಣೆ ಸಮಿತಿಯನ್ನು ಉಲ್ಲೇಖ (3) ರ ರೀತ್ಯಾ ರಚಿಸಲಾಗಿರುತ್ತದೆ.

ಅದರಂತೆ ಬೆಂಗಳೂರು ನಗರ ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಕುರಿತು ಮೇಲ್ವಿಚಾರಣೆ ಸಭೆಯನ್ನು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ದಿನಾಂಕ: 05.03.19 ರಂದು 12.00 ಘಂಟೆಗೆ ಆಯೋಜಿಸಲಾಗಿರುತ್ತದೆ.

## -:ವಿಷಯಸೂಚಿ:-

1. ರಾಷ್ಟ್ರೀಯ ಹಸಿರು ಪೀಠದ ಆದೇಶದ ಅನುಷ್ಠಾನದ ಬಗ್ಗೆ ಚರ್ಚಿಸುವುದು.
2. ಬೆಂಗಳೂರು ನಗರ ಜಿಲ್ಲೆಯ ಎಲ್ಲಾ ನಗರಸ್ಥಳೀಯ ಸಂಸ್ಥೆಗಳಲ್ಲಿ ಶೇ.100 ರಷ್ಟು ಕಸ ಸಂಗ್ರಹಣೆ, ವಿಂಗಡಣೆ ಮತ್ತು ವಿಲೇವಾರಿ ಕುರಿತು.
3. ಬೆಂಗಳೂರು ನಗರ ಜಿಲ್ಲೆಯಲ್ಲಿ ತ್ಯಾಜ್ಯ ಸಂಗ್ರಹಣೆ ಮತ್ತು ಸ್ವಚ್ಛತೆ ನಿರ್ವಹಣೆಯ ಸಂಬಂಧ ಇರುವ ತೊಂದರೆಗಳು ಮತ್ತು ಕಾರಣಗಳು.
4. ಅನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಶಿವನಹಳ್ಳಿ ಗ್ರಾಮದ ಸರ್ವೆ ನಂ:69 ರಲ್ಲಿ ಘನತ್ಯಾಜ್ಯ ವಿಲೇವಾರಿಗಾಗಿ ಮಂಜೂರು ಮಾಡಲಾಗಿರುವ ಜಾಗದ ಅಭಿವೃದ್ಧಿ ಪಡಿಸುವ ಬಗ್ಗೆ.

ಪು.ತಿ.ನೋ

Scanned by CamScanner

(32)

5. ರಾಷ್ಟ್ರೀಯ ಹಸಿರು ಪೀಠದ ಆದೇಶ 606/2018 ದಿ:16.01.2019ರ ಪ್ಯಾರಾ ಸಂಖ್ಯೆ:35 ರ ರೀತ್ಯಾ "ವಿಶೇಷ ಕಾರ್ಯಪಡೆ (Special Task Force)" ರಚಿಸಲು ಸದಸ್ಯರುಗಳನ್ನು ನಾಮ ನಿರ್ದೇಶನ ಮಾಡವ ಕುರಿತು ಈ ಕೆಳಕಂಡ ವಿಶೇಷ ಆಹ್ವಾನಿತರನ್ನು ಸಹ ಸಭೆಗೆ ಆಹ್ವಾನಿಸಿದೆ.

ಸಹಿ/-
ಜಿಲ್ಲಾಧಿಕಾರಿಗಳು
ಬೆಂಗಳೂರು ನಗರ ಜಿಲ್ಲೆ.
ಬೆಂಗಳೂರು

ವಿಶೇಷ ಆಹ್ವಾನಿತರು:

1. ಅಧ್ಯಕ್ಷರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ನಗರ ಜಿಲ್ಲೆ.
2. ಮಾನ್ಯ ಪೊಲೀಸ್ ವರಿಷ್ಠಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.
3. ಪ್ರಾದೇಶಿಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು.

ಸದರಿ ಸಭೆಗೆ ಈ ಕೆಳಕಂಡ ಎಲ್ಲಾ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಹಾಜರಾಗಲು ಕೋರಿದೆ.

1. ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಬೆಂಗಳೂರು ನಗರ ಜಿಲ್ಲೆ ರವರಿಗೆ.
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಬೆಂಗಳೂರು ನಗರ ಜಿಲ್ಲೆ ರವರಿಗೆ.
3. ಪೌರಾಯುಕ್ತರು, ನಗರಸಭೆ ಹೆಬ್ಬಗೋಡಿ, ಮುಖ್ಯಾಧಿಕಾರಿಗಳು ಪುರಸಭೆ ಆನೇಕಲ್/ ಅತ್ತಿಬೆಲೆ / ಬೊಮ್ಮಸಂದ್ರ / ಚಂದಾಪುರ/ ಜಿಗಣಿ.
4. ಪರಿಸರ ಅಭಿಯಂತರರು/ ಆರೋಗ್ಯ ನಿರೀಕ್ಷಕರು, ನಗರಸಭೆ ಹೆಬ್ಬಗೋಡಿ, ಪುರಸಭೆ ಆನೇಕಲ್/ ಅತ್ತಿಬೆಲೆ/ ಬೊಮ್ಮಸಂದ್ರ / ಚಂದಾಪುರ/ ಜಿಗಣಿ.
5. ಕಛೇರಿ ಪ್ರತಿ.

ಜಿಲ್ಲಾಧಿಕಾರಿಗಳು
ಬೆಂಗಳೂರು ನಗರ ಜಿಲ್ಲೆ.
ಬೆಂಗಳೂರು

Scanned by CamScanner